ಕರ್ನಾಟಕ ಸರ್ಕಾರ
ಸಾರ್ವಜನಿಕ ಗ್ರಂಥಾಲಯ ಇಲಾಖೆ
ಉಪನಿರ್ದೇಶಕರವರ ಕಛೇರಿ,ಜಿಲ್ಲಾ ಕೇಂದ್ರ ಗ್ರಂಥಾಲಯ, ನೆಹರು ಮಾರ್ಕೆಟ, 1ನೇ ಮಹಡಿ, ವಿಜಯಪುರ-01
email: dcl.bijapur@gmail.com ದೂರವಾಣಿ: 08352-250644

ಕ್ರ.ಸಂ: ಜಿಕೇಗ್ರಂವಿ/ಗ್ರಾಪಂಗ್ರಂ/ನೇಮಕಾತಿ/2021-22 ದಿನಾಂಕ:18-04-2022

## :ಪ್ರಕಟಣೆ:

ಸಾರ್ವಜನಿಕ ಗ್ರಂಥಾಲಯ ಇಲಾಖೆ ವತಿಯಿಂದ ವಿಜಯಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಈ ಕೆಳಕಂಡ ಗ್ರಾಮ ಪಂಚಾಯತ ಗ್ರಂಥಾಲಯಗಳಿಗೆ ಗೌರವ ಸಂಭಾವನೆ ಆಧಾರದ ಮೇಲೆ ತಾತ್ಕಾಲಿಕವಾಗಿ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ

| ಕ್ರಸಂ | ಖಾಲಿ ಇರುವ ಗ್ರಾಮ ಪಂಚಾಯತ ಗ್ರಂಥಾಲಯಗಳು | ಹುದ್ದೆಗಳ ಹೆಸರು | ಸಂಖ್ಯೆ | ನಿಗದಿಪಡಿಸಿದ ಮೀಸಲಾತಿ |
|---|---|---|---|---|
| 01. | ಚಾಂದಕವಟೆ ತಾ।। ಸಿಂದಗಿ | ಮೇಲ್ವಿಚಾರಕರು | 1 | ಪ್ರವರ್ಗ-2 ಎ (ಮಹಿಳೆ) |

ಮೇಲ್ಕಂಡ ಎಲ್ಲಾ ಗ್ರಾಮ ಪಂಚಾಯತ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗೆ ನಿಗದಿಪಡಿಸಿದ ಮೀಸಲಾತಿಯ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.

## ಷರತ್ತುಗಳು

1) ಅಭ್ಯರ್ಥಿಯು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.
2) ಅಭ್ಯರ್ಥಿಯು ಸ್ಥಳೀಯ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಾಸಿಸುತ್ತಿರಬೇಕು. ( ದೃಢೀಕರಣ ಪತ್ರ ಲಗತ್ತಿಸಿರಬೇಕು ಸ್ಥಳೀಯ ಮತದಾರರ ಪಟ್ಟಿಯ ಉದ್ಧೃತ ಭಾಗ ಲಗತ್ತಿಸಿರಬೇಕು.)
3) ನಿಗದಿಪಡಿಸಲಾದ ಮೀಸಲಾತಿಗೆ ಒಳಪಡುವ ಅಭ್ಯರ್ಥಿಗಳು ಮಾತ್ರ ಅರ್ಜಿಯನ್ನು ಸಲ್ಲಿಸತಕ್ಕದ್ದು.
4) ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅರ್ಜಿಗಳನ್ನು https://vijayapura.nic.in ಆನ್‌ಲೈನ್ ಮೂಲಕವೇ ಸಲ್ಲಿಸತಕ್ಕದ್ದು, ನೇರವಾಗಿ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ.
5) ವಯಸ್ಕರ ಶಿಕ್ಷಣದಡಿ ನಡೆಯುತ್ತಿರುವ ಮುಂದುವರಿಕಾ ಕಲಿಕಾ ಕೇಂದ್ರಗಳ ಪ್ರೇರಕ / ಉಪಪ್ರೇರಕರು ಅರ್ಜಿ ಸಲ್ಲಿಸಿದ್ದಲ್ಲಿ ಕಡ್ಡಾಯವಾಗಿ ಅವರನ್ನು ನೇಮಿಸುವುದು. ಪ್ರೇರಕ / ಹಾಗೂ ಉಪಪ್ರೇರಕರಿಗೂ ಮೀಸಲಾತಿ ಅನ್ವಯಿಸುತ್ತದೆ.
6) ಪ್ರೇರಕ / ಉಪಪ್ರೇರಕರಾಗಿ ನೇಮಕಗೊಂಡ ನಂತರ ಪ್ರೇರಕ / ಉಪಪ್ರೇರಕರ ಹುದ್ದೆಗೆ ರಾಜೀನಾಮೆ ನೀಡತಕ್ಕದ್ದು ಹಾಗೂ ಬಿಡುಗಡೆ ಪತ್ರವನ್ನು ಜಿಲ್ಲಾ ಸಾಕ್ಷರತಾ ಅಧಿಕಾರಿ ಇವರಿಂದ ಪಡೆದು ಈ ಕೆಲಸಕ್ಕೆ ಹಾಜರಾಗುವಾಗ ಸಲ್ಲಿಸತಕ್ಕದ್ದು.
7) ಗ್ರಂಥಾಲಯ ವಿಜ್ಞಾನದಲ್ಲಿ ತರಬೇತಿ ಪಡೆದಿದ್ದವರಿಗೆ ಆದ್ಯತೆ ನೀಡಲಾಗುವುದು.
8) ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡುವುದು. ಮೇಲಿನ ಷರತ್ತುಗಳು ಪೂರೈಸುವ ಹೆಚ್ಚು ಅಂಕ ಪಡೆದವರನ್ನು ಆಯ್ಕೆ ಮಾಡಲಾಗುವುದು.
9) ವಯೋಮಿತಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಗರಿಷ್ಠ ವಯೋಮಿತಿ ಈ ಕೆಳಗಿನಂತಿರತಕ್ಕದ್ದು.
   ಎ) ಸಾಮನ್ಯ ವರ್ಗ - 35 ವರ್ಷ
   ಬಿ) 2ಎ, ಎಬಿ, 3ಎ, 3ಬಿ - 38 ವರ್ಷ
   ಸಿ) ಪ.ಜಾತಿ/ಪ.ಪಂಗಡ/ಪ್ರವರ್ಗ-1 - 40 ವರ್ಷ
10) ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 8 ಸೇಹಿಯಾ 95, ದಿನಾಂಕ 20-6-1995 ಮತ್ತು ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 97 ಸೇಸನಿ 2002 ದಿನಾಂಕ 22-12-2002 ರಲ್ಲಿ ನಮೂದಿಸಿದ ಮೀಸಲಾತಿಯನ್ನು ಅನುಸರಿಸಿ ಆಯ್ಕೆ ಮಾಡಲಾಗುವುದು.

ಗ್ರಾಮ ಪಂಚಾಯತ ಗ್ರಂಥಾಲಯ ಮೇಲ್ವಿಚಾರಕರ ಆಯ್ಕೆಗಾಗಿ ಅರ್ಜಿ ಸಲ್ಲಿಸುವವರು https://vijayapura.nic.in ಆನ್ ಲೈನ್ ಮೂಲಕವೇ ಅರ್ಜಿ ಸಲ್ಲಿಸುವುದು.

**ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ <u>17-05-2022</u>**

ಉಪ ನಿರ್ದೇಶಕರು
ಜಿಲ್ಲಾ ಕೇಂದ್ರ ಗ್ರಂಥಾಲಯ
ವಿಜಯಪುರ